ಬೆಳಗಾವಿ ಸುವರ್ಣ ವಿಧಾನ ಸೌಧ

594 (566) ಶ್ರೀ ಸಂಜಯ್ ಬಿ. ಪಾಟೀಲ್ :– ಮಾನ್ಯ ಮುಖ್ಯ ಮಂತ್ರಿಗಳು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಬೆಳಗಾವಿ ಸುವರ್ಣಸೌಧಕ್ಕೆ ಬೆಳಗಾವಿ ವಲಯದ ವ್ಯಾಪ್ತಿಯಲ್ಲಿ ಬರುವ ಪ್ರಮುಖ ಕಛೇರಿಗಳನ್ನು ಸ್ಥಳಾಂತರಗೊಳಿಸುವ ಉದ್ದೇಶ ಸರ್ಕಾರದ ಮುಂದಿದೆಯೇ ಹಾಗಿದ್ದಲ್ಲಿ, ಯಾವಾಗ ಕಾರ್ಯಗತಗೊಳಿಸಲಾಗುತ್ತದೆ.

(ಆ) ಸುವರ್ಣಸೌಧ ಕಟ್ಟಡ ನಿರ್ಮಾಣ ಮಾಡಲು ಬೆಳಗಾವಿ ತಾಲ್ಲೂಕಿನ ಹಲಗಾಬಸ್ತವಾಡ ಗ್ರಾಮದ ಜನರು ಸ್ವ–ಇಚ್ಛೆಯಿಂದ ಜಮೀನುಗಳನ್ನು ನೀಡಿದ್ದು, ಹಿಂದಿನ ಸರ್ಕಾರ ಭೂಮಿ ನೀಡಿದ ರೈತರ ಕುಟುಂಬದವರಿಗೆ ಒಂದು ಸರ್ಕಾರಿ ನೌಕರಿ ನೀಡುವುದಾಗಿ ಆಶ್ವಾಸನೆ ನೀಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ಹಾಗಿದ್ದಲ್ಲಿ, ಯಾವ ಕ್ರಮ ಕೈಗೊಳ್ಳಲಾಗಿದೆ ? (ವಿವರಣೆ ನೀಡುವುದು)

ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು) :

(ಅ) ಬೆಳಗಾವಿ ವ್ಯಾಪ್ತಿಯಲ್ಲಿ ಬರುವ ಪ್ರಮುಖ ಕಛೇರಿಗಳನ್ನು ಸ್ಥಳಾಂತರಗೊಳಿಸುವ ಪ್ರಸ್ತಾವನೆ ಸದ್ಯಕ್ಕೆ ಸರ್ಕಾರದ ಮುಂದೆ ಇರುವುದಿಲ್ಲ.

(ಆ) ಸುವರ್ಣಸೌಧ ಕಟ್ಟಡದ ನಿರ್ಮಾಣಕ್ಕಾಗಿ ಭೂಸ್ವಾಧೀನ ಪಡಿಸಿಕೊಂಡ ರೈತರ ಕುಟುಂಬದವರಿಗೆ ಸರ್ಕಾರಿ ನೌಕರಿ ಕೊಡುವುದಕ್ಕೆ ನಿಯಮಗಳಲ್ಲಿ ಅವಕಾಶವಿರುವುದಿಲ್ಲ.

ಹೋಂಗಾರ್ಡ್ ನೌಕರರನ್ನು ಖಾಯಂಗೊಳಿಸುವುದು

593 (1051) ಶ್ರೀ ರೇವಣ್ಣ ಹೆಚ್.ಡಿ. (ಹೊಳೇನರಸೀಪುರ) :– ಮಾನ್ಯ ಗೃಹ ಸಚಿವರು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಹತ್ತು ವರ್ಷಗಳನ್ನು ಪೂರೈಸಿರುವ ಸನ್ನಡತೆಯುಳ್ಳ ನೌಕರರನ್ನು ಪೊಲೀಸ್ ಇಲಾಖೆಗೆ ಖಾಯಂ ನೌಕರರನ್ನಾಗಿ ನೇಮಕ ಮಾಡಲಾಗುವುದೇ ?

(ಆ) ಇಲ್ಲದಿದ್ದಲ್ಲಿ, ಕಾರಣಗಳೇನು ? (ಪೂರ್ಣ ಮಾಹಿತಿ ನೀಡುವುದು)

ಶ್ರೀ ಕೆ. ಜೆ ಜಾರ್ಜ್ (ಮಾನ್ಯ ಗೃಹ ಸಚಿವರು) :

(ಅ) ಹತ್ತು ವರ್ಷಗಳನ್ನು ಪೂರೈಸಿರುವ ಸನ್ನಡತೆಯುಳ್ಳ ಹಾಗೂ ನೈತಿಕವಾಗಿ ಅರ್ಹರಾಗಿರುವ ಗೃಹರಕ್ಷಕರನ್ನು ಪೊಲೀಸ್ ಇಲಾಖೆಗೆ ಖಾಯಂ ನೌಕರರನ್ನಾಗಿ ನೇಮಕ ಮಾಡಲು ನಿಯಮಾವಳಿಗಳಲ್ಲಿ ಅವಕಾಶವಿರುವುದಿಲ್ಲ.

(ಆ) ಗೃಹರಕ್ಷಕ ದಳಕ್ಕೆ ಸ್ವಯಂಸೇವಕರಾಗಿ ನೇಮಕ ಮಾಡಿಕೊಳ್ಳಲಾಗುವ ಗೃಹರಕ್ಷಕರಿಗೆ ಕನಿಷ್ಠ 20 ವರ್ಷ ಹಾಗೂ ಗರಿಷ್ಠ 50 ವರ್ಷ ವಯೋಮಿತಿಯನ್ನು ನಿಗದಿಪಡಿಸಲಾಗಿರುತ್ತದೆ. ಆದರೆ ಪೊಲೀಸ್ ಇಲಾಖೆಯಲ್ಲಿ 25–26 ವರ್ಷಗಳ ಗರಿಷ್ಠ ವಯೋಮಿತಿ ನಿಗದಿಪಡಿಸಿದೆ. ಆದುದರಿಂದ ಹತ್ತು ವರ್ಷಗಳ ಸೇವೆಯನ್ನು ಪೂರೈಸಿರುವ ಗೃಹರಕ್ಷಕರು 30 ವರ್ಷ ವಯಸ್ಸನ್ನು ಮೀರುತ್ತಾರೆ. ಗೃಹರಕ್ಷಕರಿಗೆ ಕನಿಷ್ಠ ವಿದ್ಯಾರ್ಹತೆ ನಾಲ್ಕನೇ ತರಗತಿಯಾಗಿದ್ದು, ಪೊಲೀಸ್ ಕಾನ್‌ಸ್ಟೇಬಲ್ ಹುದ್ದೆಗಳಿಗೆ ಎಸ್.ಎಸ್.ಎಲ್.ಸಿ./ ಪಿ.ಯು.ಸಿ. ವಿದ್ಯಾರ್ಹತೆಯನ್ನು ನಿಗದಿಪಡಿಸಿರುವುದರಿಂದ ಖಾಯಂ ನೌಕರರಾಗಿ ನೇಮಕ ಮಾಡಲು ಬರುವುದಿಲ್ಲ.

ಟ್ರಾನ್ಸ್‌ಫಾರ್ಮರ್‌ಗಳ ದುರಸ್ಥಿ

573 (450) ಶ್ರೀ ನರೇಂದ್ರಸ್ವಾಮಿ ಪಿ. ಎಂ. (ಮಳವಳ್ಳಿ) :– ಮಾನ್ಯ ಮುಖ್ಯಮಂತ್ರಿಗಳು ದಯವಿಟ್ಟು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ:–

(ಅ) ಮಳವಳ್ಳಿ ತಾಲ್ಲೂಕಿನ ವ್ಯಾಪ್ತಿಯಲ್ಲಿ ಹೆಚ್ಚಾಗಿ ಟ್ರಾನ್ಸ್‌ಫಾರ್ಮರ್‌ಗಳು ಸುಟ್ಟು ಹೋಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಹಾಗಿದ್ದಲ್ಲಿ ಈಗಾಗಲೇ ಸುಟ್ಟು ಹೋಗಿರುವ ಟ್ರಾನ್ಸ್‌ಫಾರ್ಮರ್‌ಗಳ ಸಂಖ್ಯೆ ಎಷ್ಟು ; ಇದಕ್ಕೆ ಕಾರಣಗಳೇನು ;

(ಆ) ಇವುಗಳ ದುರಸ್ಥಿಗೆ ಸರ್ಕಾರ ಕೈಗೊಂಡ ಕ್ರಮಗಳೇನು ಹಾಗೂ ಇದಕ್ಕೆ ತಗುಲಿದ ವೆಚ್ಚವೆಷ್ಟು ? (ಸಂಪೂರ್ಣ ವಿವರ ನೀಡುವುದು)

ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು) :

(ಅ) ಮತ್ತು (ಆ) ಹೌದು. ಅನಧಿಕೃತ ಪಂಪ್‌ಸೆಟ್‌ಗಳಿಂದಾಗಿ ಹಾಗೂ ಮಳೆ ಗಾಳಿಯಿಂದಾಗಿ ಮಳವಳ್ಳಿ ತಾಲ್ಲೂಕಿನಲ್ಲಿ 2012–13ನೇ ಸಾಲಿನಲ್ಲಿ 557 ಪರಿವರ್ತಕಗಳು (ಟ್ರಾನ್ಸ್‌ಫಾರ್ಮರ್‌ಗಳು) ಮತ್ತು 2013–14ನೇ ಸಾಲಿನಲ್ಲಿ (ದಿನಾಂಕ:15–07–2013 ರವರೆಗೆ) 180 ಪರಿವರ್ತಕಗಳು ವಿಫಲಗೊಂಡಿರುತ್ತವೆ.